**ದಿನಾಂಕಃ 19.11.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 1ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ಆ ದಿನ ನಾನು ಲಕ್ಷ್ಮೀಪುರದಿಂದ ಕಾಡಬಿಸಲಹಳ್ಳಿಯ ಕಡೆಗೆ ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದೇನು. ಅಪಘಾತ ಬೆಳಿಗ್ಗೆ 9-9.15 ಗಂಟೆಯ ಸಮಯದಲ್ಲಿ ಸಂಭವಿಸಿರುತ್ತದೆ. ಅಪಘಾತವಾದ ರಸ್ತೆಯಲ್ಲಿ ವಾಹನ ಸಂಚಾರ ಹೆಚ್ಚಾಗಿ ಇರುತ್ತದೆ ಎಂದರೆ ಸರಿ. ಅಪಘಾತವಾದ ರಸ್ತೆ ನೇರ ರಸ್ತೆ ಎಂದರೆ ಸರಿ. ಅಪಘಾತವಾದ ರಸ್ತೆಯ ಮುಂದೆ ಯೂ ತಿರುವು ಇದೆ ಎಂದರೆ ಸರಿ. ಅಪಘಾತವಾದ ರಸ್ತೆಯ ಮಧ್ಯಭಾಗದಲ್ಲಿ ವಿಭಜಕ ಇದೆ ಎಂದರೆ ಸರಿ. ಆ ದಿನ ನಾನು ನೇರ ರಸ್ತೆಯಲ್ಲಿ ಕಛೇರಿಗೆ ಹೋಗುತ್ತಿದ್ದೆ. ಆ ದಿನ ನಾನು ಹೆಲ್ಮೆಟ್ ಧರಿಸಿರಲಿಲ್ಲ ಎಂದರೆ ಸರಿಯಲ್ಲ. ಆ ದಿನ ನಾನೊಬ್ಬನೇ ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದೆ. ಆಪಾದಿತ ವಾಹನ ನನ್ನ ಹಿಂದಿನಿಂದ ಬಂದು ಡಿಕ್ಕಿಪಡಿಸಿರುತ್ತದೆ. ಅಪಘಾತ ರಸ್ತೆಯ ಮಧ್ಯಭಾಗದಲ್ಲಿ ಸಂಭವಿಸಿದೆ ಎಂದರೆ ಸರಿಯಲ್ಲ. ಅಪಘಾತ ನನ್ನ ತಪ್ಪಿ ನಿಂದ ಆಗಿದೆ ಎಂದರೆ ಸರಿಯಲ್ಲ. ನಾನು ಯೂ ತಿರುವು ತೆಗೆದುಕೊಳ್ಳುವ ನಿಮಿತ್ತ ಏಕಾಏಕಿ ವಾಹನ ನಿಲುಗಡೆ ಮಾಡಿದ ಪರಿಣಾಮ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ನನಗೆ ಚಾಲನಾ ಪರವಾನಗಿ ಇದೆ. ಪೊಲೀಸರು ಆಸ್ಪತ್ರೆಗೆ ಬಂದು ದೂರು ಪಡೆದಿರುತ್ತಾರೆ.

ಅಪಘಾತವಾದಾಗ ನನಗೆ ಪ್ರಜ್ಞೆ ಇತ್ತು ಎಂದರೆ ಸಾಕ್ಷಿಯು ನನಗೆ ಸ್ವಲ್ಪ ಪ್ರಜ್ಞೆ ಇತ್ತು ಎಂದು ನುಡಿದಿರುತ್ತಾರೆ. ಅಪಘಾತದ ಬಗ್ಗೆ ಆಸ್ಪತ್ರೆಯಲ್ಲಿ ತಿಳಿಸಿರುತ್ತೇನೆ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ. ಅಪಘಾತವಾದ ನಂತರ ನಾನು ಮಣಿಪಾಲ್ ಆಸ್ಪತ್ರೆಗೆ ಹೋಗಿದ್ದು, ಅಲ್ಲಿಯೇ ಎಂ.ಎಲ್.ಸಿ ಮಾಡಿರುತ್ತಾರೆ. ನಿಪಿ 9 ರ 2ನೇ ಬಿಡುಗಡೆ ಸಮರಿಯಲ್ಲಿ ನಾನೇ ಸ್ವತಃ ಬಿದ್ದು ಗಾಯಮಾಡಿಕೊಂಡಿರುತ್ತೇನೆ ಎಂದು ನಮೂದು ಇದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ನಾನು ಆ ರೀತಿ ಹೇಳಿಲ್ಲ ಎಂದು ನುಡಿಯುತ್ತಾರೆ. ಅಪಘಾತದಲ್ಲಿ ನನ್ನ ಕಿಡ್ನಿಗೆ,

ಸೊಂಟದ ಮೂಳೆಗೆ ತೊಂದರೆ ಆಗಿರುತ್ತದೆ. ಮಣಿಪಾಲ್ ಆಸ್ಪತ್ರೆಯಲ್ಲಿ ಅರ್ಧ ದಿನ ದಾಖಲಾಗಿದ್ದು, ನಂತರ ಹಾಸ್ಮಾಟ್ ಆಸ್ಪತ್ರೆಯಲ್ಲಿ ಎರಡು ವಾರಗಳ ಕಾಲ ದಾಖಲಾಗಿದ್ದೆನು. ನನಗೆ ಯಾವುದೇ ಶಸ್ತ್ರ ಚಿಕಿತ್ಸೆ ಆಗಿಲ್ಲ ಎಂದರೆ ಸರಿಯಲ್ಲ. ನನಗೆ ಸಾಧಾರಣ ಸ್ವರೂಪದ ಚಿಕಿತ್ಸೆ ನೀಡಲಾಗಿದೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ಉಂಟಾದ ಗಾಯಗಳು ವಾಸಿಯಾಗಿಲ್ಲ.

ನಾನು ಅಪಘಾತವಾಗುವ ಮೊದಲು ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದೆ. ಈಗ ನಾನು ಯಾವುದೇ ಕೆಲಸ ಮಾಡುತ್ತಿಲ್ಲ. ನಾನು ಡಿಪ್ಲೋಮಾ ತರಬೇತಿ ಪಡೆದುಕೊಂಡಿರುತ್ತೇನೆ. ನಾನು ಕೆಲಸ ಮಾಡುತ್ತಿದ್ದ ಕಂಪನಿ ಹೆಚ್.ಎಸ್.ಆರ್ ಲೇಔಟ್ ನಲ್ಲಿ ಇದ್ದು, ಅದು Centronics System ಎಂಬ ಶಿರೋನಾಮೇಯಲ್ಲಿ ಇರುತ್ತದೆ. ಸದರಿ ಕಂಪನಿಯಲ್ಲಿ ನಾನು ಡಿಸೈನರ್ ಆಗಿ ಕೆಲಸ ಮಾಡುತ್ತಿದ್ದೆ. ನನಗೆ ರೂ.65,000/- ಸಂಬಳ ನೀಡುತ್ತಿದ್ದರು. ನನ್ನ ಸಂಬಳದ ಹಣವನ್ನು ನಗದು ರೂಪದಲ್ಲಿ ನೀಡುತ್ತಿದ್ದರು. ನಾನು ಕೆಲಸ ಮಾಡುತ್ತಿದ್ದ ಕಂಪನಿಯ ಮಾಲೀಕರ ಹೆಸರು ಸೆಂಥಿಲ್ ಎಂಬುವವರಾಗಿರುತ್ತಾರೆ. ಸದರಿಯವರನ್ನು ವಿಚಾರಣೆಗೆ ಒಳಪಡಿಸಲು ತೊಂದರೆ ಇಲ್ಲ. ನಾನು ಕೆಲಸ ಮಾಡುತ್ತಿದ್ದ ಕಂಪನಿಯಲ್ಲಿ 10 ಜನ ಕೆಲಸಗಾರರು ಇದ್ದು, ಎಲ್ಲರಿಗೂ ವೇತವನ್ನು ನಗದು ರೂಪದಲ್ಲಿ ನೀಡುತ್ತಿರಲಿಲ್ಲ. ನಾನು ಆದಾಯ ತೆರಿಗೆಯನ್ನು ಪಾವತಿ ಮಾಡುತ್ತಿಲ್ಲ. ನಾನು ಕೆಲಸ ಮಾಡುತ್ತಿದ್ದ ಕಂಪನಿಯಲ್ಲಿ ಇ.ಎಸ್.ಐ ಸೌಲಭ್ಯ ಇರುವ ಬಗ್ಗೆ ನನಗೆ ಮಾಹಿತಿ ಇಲ್ಲ. ಕಂಪನಿಯಿಂದ ನನಗೆ ವೈದ್ಯಕೀಯ ವೆಚ್ಚ ಮರುಪಾವತಿಯಾಗಿಲ್ಲ. ಅಪಘಾತವಾದ ನಂತರ ನಾನು ಕೆಲಸಕ್ಕೆ ಹೋಗಿಲ್ಲ. ಇಲ್ಲಿಯವರೆಗೂ ಕಂಪನಿಯಿಂದ ನನ್ನನ್ನು ವಜಾ ಗೊಳಿಸಿದ ಬಗ್ಗೆ ಯಾವುದೇ ಪತ್ರವನ್ನು ನೀಡಿಲ್ಲ. ವೈದ್ಯಕೀಯ ವೆಚ್ಚವನ್ನು ನನ್ನ ಹೆಂಡತಿ ಪಾವತಿ ಮಾಡಿದ್ದು, ಅವರು ನಗದು ಮತ್ತು ಇತರ ರೂಪದಲ್ಲಿ ಹಣವನ್ನು ಪಾವತಿಸಿರುತ್ತಾರೆ. ಮೆಡಿಕಲ್ ಬಿಲ್ಲುಗಳನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಚಿಕಿತ್ಸೆಗೆ ಮತ್ತು ಇತರೆ ಖರ್ಚುಗಳಿಗೆ ನಾನು

ಹೇಳಿರುವಷ್ಟು ಹಣವನ್ನು ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ನಿಪಿ11 ರ ಮೊತ್ತ ಅಂತಿಮ ಬಿಲ್ಲಿನಲ್ಲಿ ಒಳಗೊಂಡಿರುತ್ತದೆ ಎಂದರೆ ಸರಿಯಲ್ಲ.

ನನ್ನ ಜನ್ಮ ದಿನಾಂಕ 03.05.1995 ಆಗಿರುತ್ತದೆ. ಅಪಘಾತವಾದಾಗ ನನಗೆ 30ಕ್ಕಿಂತ ಹೆಚ್ಚಿ ನ ವಯಸ್ಸು ಆಗಿತ್ತು ಎಂದರೆ ಸರಿಯಲ್ಲ. ಅಪಘಾತದಲ್ಲಿ ಆಪಾದಿತ ವಾಹನ ಭಾಗಿಯಾಗಿಲ್ಲ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ದಾಖಲಾತಿಗಳನ್ನು ಸೃಷ್ಟಿ ಮಾಡಿ ಹಾಜರುಪಡಿಸಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**